ಮೂಲ ದಾವಾ ಸಂಖ್ಯೆ 111/2021 ಪಿ ಡಬ್ಲ್ಯೂ 1

(ದಿನಾಂಕ 05-07-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.)

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಕೆ ಜೆ ವಕೀಲರಿಂದಃ-

ನಾನು ನನ್ನ ಸ್ವಪ್ರಮಾಣೀಕೃತ ಹೇಳಿಕೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು,ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು ಅದಕ್ಕೆ ನಾನೇ ಹೆಬ್ಬೆಟ್ಟಿನ ಸಹಿ ಮಾಡಿದ್ದೇನೆ.

ಸರ್ವೆ ನಂ. 320/ಬಿ ಗೆ ಸಂಬಂಧಿಸಿದ 5 ಕೈಬರಹ ಪಹಣಿಗಳ ದೃಢಿಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ 5 ಎಂದು, ಸದರಿ ಸರ್ವೆ ನಂಬರಿಗೆ ಸಂಬಂಧಿಸಿದ 21 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-6 ರಿಂದ 26 ಎಂದು, ಸರ್ವೆ ನಂ. 370/ಎ ಗೆ ಸಂಬಂಧಿಸಿದ 5 ಕೈಬರಹ ಪಹಣಿಗಳ ದೃಢಿಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-27 ರಿಂದ 31 ಎಂದು, ಸದರಿ ಸರ್ವೆ ನಂಬರಿಗೆ ಸಂಬಂಧಿಸಿದ 20 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-32 ರಿಂದ 51 ಎಂದು, ಎಂ ಆರ್ ನಂ. 129 ರ ದೃಢಿಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-52 ಎಂದು, ವಂಶವೃಕ್ಷದ ಪ್ರಮಾಣಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-53 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಸಮಯಾವಕಾಶ ಕೋರಿದ್ದು ನೀಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ,

ಸಿವಿಲ್ ಜಡ್ಜ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ